ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ ಹಾನಗಲ್.

ದಿನಾಂಕಃ 04 ನೇ ನವಂಬರ್ ತಿಂಗಳು 2024 ರಂದು

ಸಿಸಿ ನಂ.774/2024

ಫಿರ್ಯಾದುದಾರರುಃ ಸರಕಾರ (ಹಾನಗಲ್ ಪೊಲೀಸರಿಂದ)

ವಿರುದ್ಧ

ಆರೋಪಿಃ 1. ಮಹೇಶ ಪೂಜಾರ್,
ವಃ 27 ವರ್ಷ,
ವಾಸಃ ಚಿದಂಬರ ನಗರ, ಹಾನಗಲ್ಲ,
ಹಾನಗಲ್ಲ ತಾಲ್ಲೂಕು, ಹಾವೇರಿ ಜಿಲ್ಲೆ.

ದಂಡ ಪ್ರಕ್ರಿಯಾ ಸಂಹಿತೆಯ ಕಲಂ **251** ರ ಅಡಿಯಲ್ಲಿ ಆರೋಪಣಾ ಸಾರಾಂಶ

ದಿನಾಂಕಃ 17.06.2024 ರಂದು ಮದ್ಯಾಹ್ನ 12 ಗಂಟೆಯಿಂದ ಮಧ್ಯಾಹ್ನ 1.35 ಗಂಟೆಯವರೆಗೆ ಹಾನಗಲ್ ಪೋಲೀಸ್ ಠಾಣಾ ವ್ಯಾಪ್ತಿಯ ಮಂತಗಿ ಕ್ರಾಸ್ ಸಾರ್ವಜನಿಕ ರಸ್ತೆಯ ಮೇಲೆ ಆರೋಪಿಯಾದ ನೀವು ಇತರ ಆರೋಪಿತರೊಂದಿಗೆ ದುಂಡಾಗಿ ಕುಳಿತುಕೊಂಡು ನಿಮ್ಮ ಹಣವನ್ನು ಪಣಕ್ಕೆ ಹಚ್ಚಿ ಅಂದರ್ ಬಾಹರ್ ಇಸ್ಪೀಟ್ ಜೂಜಾಟವನ್ನು ಆಡುತ್ತಿದ್ದರಿಂದ, ನೀವು ಕರ್ನಾಟಕ ಪೋಲೀಸ್ ಕಾಯ್ದೆಯ ಕಲಂ 87 ನೇದ್ದರ ಅಡಿಯಲ್ಲಿ ಶಿಕ್ಷಾರ್ಹ ಅಪರಾಧವನ್ನು ಎಸಗಿರುತ್ತೀರೆಂದು ನಿಮ್ಮ ಮೇಲೆ ಆರೋಪಣೆ ಇರುತ್ತದೆ.

| | |
|---|---|
| ಪ್ರಶ್ನೆಃ1 | ನಿಮಗೆ ತಿಳಿದಿರುವ ಭಾಷೆಯಲ್ಲಿ ಓದಿ ವಿವರಿಸಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ? |
| ಉತ್ತರಃ | |
| ಪ್ರಶ್ನೆಃ 2 | ನೀವು ಮೇಲಿನ ಆಪಾದನೆಯನ್ನು ಒಪ್ಪಿಕೊಳ್ಳುವಿರಾ ಅಥವಾ ವಿಚಾರಣೆ ಆಗಬೇಕೆಂದು ಬಯಸುವಿರಾ? |
| ಉತ್ತರಃ | |

ಮೇಲ್ಕಾಣಿಸಿದ ಆಪಾದನೆಯನ್ನು ಆರೋಪಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ಯಥಾವತ್ತಾಗಿ ದಾಖಲಿಸಲಾಗಿದೆ ಎಂದು ಈ ಮೂಲಕ ದೃಢೀಕರಿಸಲಾಗಿದೆ.

Sd/-

(ರಾಜೇಶ್ವರಿ ಜೆ ಪುರಾಣಿಕ)
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾದಂ., ಹಾನಗಲ್.